# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 993 |
| ಸದಸ್ಯರ ಹೆಸರು | : | ಶ್ರೀಮತಿ ಬಲ್ಕೀಸ್ ಬಾನು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 17.12.2024 |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಜಿಲ್ಲೆ, ಭದ್ರಾವತಿಯಲ್ಲಿರುವ ಎಂ.ಪಿ.ಎಂ. ಕಾರ್ಖಾನೆಯು ಸಂಪೂರ್ಣವಾಗಿ ಮುಚ್ಚಲ್ಪಟ್ಟಿರುವುದು ನಿಜವೇ; | ಮೈಸೂರು ಕಾಗದ ಕಾರ್ಖಾನೆಯು (ಎಂ.ಪಿ.ಎಂ.) ತೀವ್ರ ತರಹದ ಹಣಕಾಸಿನ ಸಮಸ್ಯೆಯನ್ನು ಎದುರಿಸುತ್ತಿದ್ದು, ಸರ್ಕಾರವು ಕಾರ್ಖಾನೆಯನ್ನು ಪುನರುಜ್ಜೀವನಗೊಳಿಸಲು ಸಾಧ್ಯವಿಲ್ಲವೆಂದು ತೀರ್ಮಾನಿಸಿ ಕಾರ್ಖಾನೆಯ ಕಾರ್ಯಚಟುವಟಿಕೆಗಳನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದಲ್ಲಿ ನೀಡಬೇಕೆಂದು ತೀರ್ಮಾನ ಕೈಗೊಂಡಿರುತ್ತದೆ. ಅದರಂತೆ, ಕಾರ್ಖಾನೆಯ ಎಲ್ಲಾ ಉತ್ಪಾದನಾ ಘಟಕಗಳನ್ನು 2015-2016 ರಿಂದ ಸ್ಥಗಿತಗೊಳಿಸಲಾಗಿರುತ್ತದೆ. ಇದರ ಪ್ರಸ್ತುತ ಲೆಕ್ಕ ಪರಿಶೋಧನೆಯಲ್ಲದ ಅಂದಾಜು ನಷ್ಟ ದಿನಾಂಕ: 30.06.2024ರ ಅಂತ್ಯಕ್ಕೆ ರೂ.1,541.54 ಕೋಟಿಗಳಷ್ಟು ಇರುತ್ತದೆ. |
| ಆ) | ಹಾಗಿದ್ದಲ್ಲಿ, ಈ ಕಾರ್ಖಾನೆಯನ್ನು ಪುನರ್ ಪ್ರಾರಂಭಿಸಲು ಸರ್ಕಾರವು ಉದ್ದೇಶಿಸಿದೆಯೇ; ಉದ್ದೇಶಿಸಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳಾವುವು;(ವಿವರ ನೀಡುವುದು) | ಸರ್ಕಾರವು ಮೈಸೂರು ಕಾಗದ ಕಾರ್ಖಾನೆಯ ಪುನರುಜ್ಜೀವನ ಸಾಧ್ಯವಿಲ್ಲವೆಂದು ತೀರ್ಮಾನಿಸಿ ಕಾರ್ಖಾನೆಯ ಕಾರ್ಯಚಟುವಟಿಕೆಗಳನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದಲ್ಲಿ ನೀಡಬೇಕೆಂದು ತೀರ್ಮಾನ ಕೈಗೊಂಡು, ಈ ಪ್ರಕ್ರಿಯೆಗಳಿಗೆ ಮ\|\| ಐಡೆಕ್‌ನ ಸೇವೆಗಳನ್ನು ಬಳಸಿಕೊಳ್ಳಲಾಗುತ್ತಿದೆ.<br><br>ಆರ್.ಎಫ್.ಕ್ಯೂ. ಅನ್ನು ಏಪ್ರಿಲ್ 2017, ಆಗಸ್ಟ್ 2018 ಹಾಗೂ ಮಾರ್ಚ್ 2019 ರಲ್ಲಿ ಪ್ರಕಟಿಸಲಾಗಿತ್ತು. ಆರ್.ಎಫ್.ಕ್ಯೂ.ಗೆ ಯಾವುದೇ ಅರ್ಜಿ ಸ್ವೀಕೃತವಾಗಿರುವುದಿಲ್ಲ.<br><br>ಆರ್.ಎಫ್.ಕ್ಯೂ. ಅನ್ನು ಕಂಪನಿಯು ಮೊದಲೇ ಅಪ್‌ಲೋಡ್ ಮಾಡಲಾಗಿದ್ದು ಮತ್ತು ಆರ್.ಎಫ್.ಕ್ಯೂ. ಗಾಗಿ ಈಗಾಗಲೇ ವ್ಯಾಪಕ ಪ್ರಚಾರವನ್ನು ನೀಡಲಾಗಿರುವುದರಿಂದ ಪ್ರಸ್ತಾವನೆಗಾಗಿ ವಿನಂತಿಯನ್ನು (ಆರ್‌ಎಫ್‌ಪಿ) ನೇರವಾಗಿ ದಿನಾಂಕ 25.11.2020 ರಂದು ಅಪ್‌ಲೋಡ್ ಮಾಡಲಾಗಿದ್ದು, ಇ-ಟೆಂಡರ್ ತೆರೆದಾಗ ಯಾವುದೇ ಬಿಡ್‌ಗಳು ಸ್ವೀಕೃತವಾಗಿರುವುದಿಲ್ಲ.<br><br>ದಿನಾಂಕ: 07.09.2023 ರಂದು ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆದಿರುತ್ತದೆ. ಈ ಸಭೆಯಲ್ಲಿ ತೀರ್ಮಾನಿಸಿದಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ |

| | | |
|---|---|---|
| | | ಅಧ್ಯಕ್ಷತೆಯಲ್ಲಿ ಸಹ ದಿ:17.11.2023 ರಂದು ಸಭೆ ನಡೆಸಿದ್ದು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ:<br><br>[1] ಅರಣ್ಯ ಇಲಾಖೆಯ ತಜ್ಞರ ಸಮಿತಿಯು ನೀಲಗಿರಿ ಬೆಳೆಯಲು ಎಂ.ಪಿ.ಎಂ.ಗೆ ವಿನಾಯಿತಿ ನೀಡುವ ಸಂಬಂಧ ಪರಿಶೀಲಿಸಿ ವರದಿ ನೀಡಬೇಕಾಗಿದೆ.<br><br>[2] KPTCL / MESCOM ಗೆ ಪಾವತಿ ಮಾಡಬೇಕಾದ ವಿದ್ಯುತ್ ಶುಲ್ಕ ಮತ್ತು ಅದರ ಮೇಲಿನ ಬಡ್ಡಿಯನ್ನು ಮನ್ನಾ ಮಾಡಲು ಕ್ರಮ ಕೈಗೊಳ್ಳುವಂತೆ ಇಂಧನ ಇಲಾಖೆಯನ್ನು ದಿನಾಂಕ 08.01.2024 ರಂದು ಕೋರಲಾಗಿದೆ. ಇಂಧನ ಇಲಾಖೆಯು ದಿನಾಂಕ: 05.04.2024ರ ಪತ್ರದಲ್ಲಿ ವಿದ್ಯುತ್ ಬಿಲ್ಲಿನ ಬಾಬ್ತು ಅಸಲು ಮತ್ತು ಬಡ್ಡಿ ಮೊತ್ತವನ್ನು ಮನ್ನಾ ಮಾಡಲು ಸಾಧ್ಯವಿರುವುದಿಲ್ಲ ಎಂದು ತಿಳಿಸಿರುತ್ತಾರೆ. ವಿಷಯವು ಪರಿಶೀಲನೆಯಲ್ಲಿದೆ.<br><br>[3] ಕಂಪನಿಯ ಸಾಲಗಳು/ಬಾಕಿಗಳ ಕುರಿತು ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಲಾಗುತ್ತಿದೆ.<br><br>ನಿರೀಕ್ಷಿತ ಬಿಡ್ಡುದಾರರು ನೀಲಗಿರಿ ಬೆಳೆಯಲು ಎಂ.ಪಿ.ಎಂ.ಗೆ ವಿನಾಯಿತಿ ಹಾಗೂ ಯಾವುದೇ ಹೊಣೆಗಾರಿಕೆಗಳಿಲ್ಲದ ಕಂಪನಿಯ ಕಾರ್ಯಾಚರಣೆಗಳನ್ನು ನಡೆಸಲು ಬಯಸುವುದರಿಂದ ಅದರಂತೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದ್ದು ತದನಂತರ ಕಾರ್ಖಾನೆಯನ್ನು ಪುನರ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತದೆ. |

ಸಿಐ 59 ಸಿಪಿಎಂ 2024 (ಇ)

**(ಎಂ.ಬಿ ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು.